15

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 8/9/2020

# ಅಧಿವೇಶನಕ್ಕೆ ಕಾಂಗ್ರೆಸ್ ಸನ್ನದ್ಧ

## 16ಕ್ಕೆ ಸಿಎಲ್‌ಪಿ ಸಭೆ, ಶಾಸಕರೊಂದಿಗೆ ಸಮಾಲೋಚನೆ

▪ ವಿಕ ಸುದ್ದಿಲೋಕ ಬೆಂಗಳೂರು

ವಿಧಾನಮಂಡಲದ ಉಭಯ ಸದನಗಳ ಅಧಿವೇಶನದಲ್ಲಿ ಬಿಜೆಪಿ ಸರಕಾರದ ಭ್ರಷ್ಟಾಚಾರವೂ ಸೇರಿದಂತೆ ಆಡಳಿತ ವೈಫಲ್ಯಗಳನ್ನು ಎಳೆಎಳೆಯಾಗಿ ಬಿಚ್ಚಿಡಲು ಪ್ರತಿಪಕ್ಷ ಕಾಂಗ್ರೆಸ್ ಭರ್ಜರಿ ಸಿದ್ಧತೆ ಆರಂಭಿಸಿದೆ.



ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರು ಅಧಿವೇಶನಕ್ಕೆ 2 ವಾರ ಮೊದಲೇ ಆರಂಭಿಸಿರುವ ತಯಾರಿ ಗಮನಿಸಿದರೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ನೇತೃತ್ವದ ಬಿಜೆಪಿ ಸರಕಾರಕ್ಕೆ ಅಧಿವೇಶನ ಎದುರಿಸುವುದು ಈ ಸಲ ಅಷ್ಟೊಂದು ಸುಲಭವಲ್ಲ. ವಿವಾದಾತ್ಮಕ ಸುಗ್ರೀವಾಜ್ಞೆಗಳು ಸೇರಿದಂತೆ ಒಂದು ಡಜನ್‌ಗೂ ಹೆಚ್ಚು ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸಲು ಅಜೆಂಡಾ ರೂಪಿಸುತ್ತಿದೆ. ಕಾಂಗ್ರೆಸ್‌ನ ಹಾಲಿ ಶಾಸಕರು, ಮಾಜಿ ಸಚಿವರ ಪಡೆ ಸರಕಾರವನ್ನು ಇಕ್ಕಟ್ಟಿಗೆ ಸಿಲುಕಿಸಬಹುದಾದ ಎಲ್ಲಾ ರೀತಿಯ ದಾಖಲೆ, ಮಾಹಿತಿಗಳನ್ನು ಪಡೆಯುವ ಕೆಲಸದಲ್ಲಿ ಮಗ್ನವಾಗಿದೆ. ಹೀಗಾಗಿ ಈ ಅಧಿವೇಶನ ಸರಕಾರದ ಪಾಲಿಗೆ ಅಗ್ನಿಪರೀಕ್ಷೆಯಾದರೆ ಪ್ರತಿಪಕ್ಷ ಕಾಂಗ್ರೆಸ್‌ಗೆ ಅಷ್ಟೇ ಸವಾಲಾಗಿದೆ.

ಅಧಿವೇಶನ ಹಿನ್ನೆಲೆಯಲ್ಲಿ ಪಕ್ಷದ ಶಾಸಕರೊಂದಿಗೆ ಸೋಮವಾರ ಝೂಮ್ ಆ್ಯಪ್ ಮೂಲಕ ಸಮಾಲೋಚಿಸಿದ ಸಿದ್ದರಾಮಯ್ಯ ಅವರು ಕಲಾಪಕ್ಕೆ ಪಕ್ಷ ಯಾವ ರೀತಿ ಸಕ್ರಿಯವಾಗಿರಬೇಕು ಎಂಬುದರ ಬಗ್ಗೆ ಸಮಾಲೋಚಿಸಲು ಇದೇ 16 ರಂದು ಶಾಸಕಾಂಗ ಪಕ್ಷದ ಸಭೆ ಕರೆಯಲು ನಿರ್ಧರಿಸಿದ್ದಾರೆ. ಕೋವಿಡ್ ಉಪಕರಣಗಳ ಖರೀದಿಯಲ್ಲಿ ನಡೆದಿರುವ ಅವ್ಯವಹಾರ, ಸರಕಾರದಲ್ಲಿ ನಡೆದಿರುವ ಭ್ರಷ್ಟಾಚಾರ, ಡ್ರಗ್ ಮಾಫಿಯಾ, ಡಿ.ಜೆ. ಹಳ್ಳಿ ಘಟನೆ, ಜಿಎಸ್‌ಟಿ ಹಾಗೂ ವಿವಿಧ ವಿಧೇಯಕಗಳ ಬಗ್ಗೆ ಶಾಸಕಾಂಗ ಪಕ್ಷದ ಸಭೆಯಲ್ಲಿ ಸಮಾಲೋಚಿಸುತ್ತೇವೆ ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.

>  ರಾಜ್ಯ ಸರಕಾರದ ವಿವಿಧ ಇಲಾಖೆಗಳಲ್ಲಿ ಭ್ರಷ್ಟಾಚಾರ ಮಿತಿ ಮೀರಿದೆ. ಈ ಕುರಿತು ಮಂತ್ರಿಗಳೇ ಅಲ್ಲಲ್ಲಿ ಮಾತನಾಡುತ್ತಿದ್ದಾರೆ. ಪರ್ಸೆಂಟೇಜ್ ಕೊಡದ ಶಾಸಕರ ಕ್ಷೇತ್ರಗಳಿಗೆ ಅನುದಾನವಿಲ್ಲ ಎಂಬಂತೆ ಆಗಿದೆ. ಬಿಜೆಪಿ ಸಚಿವರ ಕ್ಷೇತ್ರದಲ್ಲಿಯೂ ಅನುದಾನಕ್ಕಾಗಿ ಲಂಚ ಕೊಡಬೇಕಾದ ವಾತಾವರಣ ನಿರ್ಮಾಣವಾಗಿದೆ. ಈ ಬಗ್ಗೆ ಸದನದಲ್ಲಿ ಚರ್ಚಿಸುತ್ತೇವೆ.
>
> -ಸಿದ್ದರಾಮಯ್ಯ

ಅಧಿವೇಶನದಲ್ಲಿ ಕೇಳಲು ಮಾಜಿ ಸಚಿವರ ತಂಡ ಪ್ರಶ್ನೆ ಸಿದ್ಧಪಡಿಸಿದೆ. ಈ ವಿಷಯದಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಕಚೇರಿ ಹಾಗೂ ವಿಧಾನಸಭೆ, ವಿಧಾನ ಪರಿಷತ್‌ನ ಪ್ರತಿಪಕ್ಷದ ಮುಖ್ಯ ಸಚೇತಕರ ಕಚೇರಿ ಶಾಸಕರಿಗೆ ನೆರವಾಗಲಿದೆ. ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಎಸ್.ಆರ್. ಪಾಟೀಲ್, ಹಿರಿಯ ನಾಯಕರಾದ ಎಚ್.ಕೆ. ಪಾಟೀಲ್, ಆರ್.ವಿ. ದೇಶಪಾಂಡೆ ಮತ್ತಿತರರು ಸೇರಿದಂತೆ ವಿಧಾನಸಭೆ ಹಾಗೂ ವಿಧಾನ ಪರಿಷತ್ ಸದಸ್ಯರು ಚರ್ಚೆಯಲ್ಲಿ ಪಾಲ್ಗೊಂಡಿದ್ದರು. ಸದನದಲ್ಲಿ ಸದಸ್ಯರು ಸಕ್ರಿಯವಾಗಿ ಭಾಗವಹಿಸಬೇಕೆಂದು ಸೂಚನೆ ನೀಡಿದ್ದಾರೆ.

ಕಾಂಗ್ರೆಸ್ ಶಾಸಕಾಂಗ ಪಕ್ಷದ ಕಾರ್ಯದರ್ಶಿ ತುಕಾರಾಂ, ವಿಧಾಸಭೆ ಪ್ರತಿಪಕ್ಷದ ಮುಖ್ಯ ಸಚೇತಕ ಡಾ. ಅಜಯ್ ಸಿಂಗ್, ವಿಧಾನ ಪರಿಷತ್ತಿನ ಪ್ರತಿಪಕ್ಷದ ಮುಖ್ಯ ಸಚೇತಕ ನಾರಾಯಣಸ್ವಾಮಿ ಅವರು ಹಾಜರಿದ್ದರು.

# ಕೇಂದ್ರದ ವಿರುದ್ಧ ಸಿದ್ದು ಕಿಡಿ

▪ ವಿಕ ಸುದ್ದಿಲೋಕ ಬೆಂಗಳೂರು

ಜಿಎಸ್‌ಟಿ ಪರಿಹಾರ ನಿರಾಕರಿಸುವ ಮೂಲಕ ಕೇಂದ್ರ ಸರಕಾರವು ರಾಜ್ಯದ ಜನರಿಗೆ ದ್ರೋಹ ಬಗೆದಿದ್ದು, ಇಂತಹ ಸರಕಾರ ಅಧಿಕಾರದಲ್ಲಿ ಏಕಿರಬೇಕು ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದರು.

ಪಕ್ಷದ ಶಾಸಕರೊಂದಿಗೆ ಝೂಮ್ ಆ್ಯಪ್‌ನಲ್ಲಿ ಸಮಾಲೋಚಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಜಿಎಸ್‌ಟಿ ಪರಿಹಾರ ಕೊಡದಿದ್ದರೆ ಅಧಿಕಾರದಿಂದ ಬಿಟ್ಟು ಹೋಗಿ ಎಂದು ತಾಕೀತು ಮಾಡಿದರು. ''ಜಿಎಸ್‌ಟಿ ಪರಿಹಾರ ಕಾನೂನು. ಈಗ ಅದನ್ನು ಉಲ್ಲಂಘಿಸುವ ಮೂಲಕ ಸಂವಿಧಾನ ವಿರೋಧಿ ಹಾಗೂ ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾಗಿ ಕೇಂದ್ರ ನಡೆದುಕೊಳ್ಳುತ್ತಿದೆ. ಖಜಾನೆಯಲ್ಲಿ ಹಣವಿಲ್ಲವೆಂದರೆ ಸಾಲ ತಂದಾದರೂ ಕೇಂದ್ರ ಸರಕಾರ ಜನರಿಗೆ ಸಹಾಯ ಮಾಡಬೇಕು. ಸಬ್ಸಿಡಿ ಇಲ್ಲ, ಸಂಬಳ ಕೊಡಲಾಗದು, ಜಿ.ಎಸ್.ಟಿ. ಪರಿಹಾರ ಕೊಡುವುದಕ್ಕೆ ಆಗುವುದಿಲ್ಲ ಎನ್ನುವುದಕ್ಕೆ ಅಧಿಕಾರದಲ್ಲಿ ಏಕಿರಬೇಕು,'' ಎಂದು ಎಂದು ಕಿಡಿಕಾರಿದರು.